ಕರ್ನಾಟಕ ವಿಧಾನ ಪರಿಷತ್ತು

1	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1202
2	ಸದಸ್ಯರ ಹೆಸರು	ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
3	ಉತ್ತರಿಸಬೇಕಾದ ದಿನಾಂಕ	22.09.2021
4	ಉತ್ತರಿಸುವ ಸಚಿವರು	ಕಂದಾಯ ಸಚಿವರು

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರೈತರಿಂದ ಪೋಡಿ / ಭೂಮಾಪನ ಮತ್ತು ನಕ್ಷೆ ಕೋರಿ ಸಲ್ಲಿಕೆ ಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು;</td><td>
2021-22 ನೇ ಸಾಲಿನಲ್ಲಿ ರಾಜ್ಯದಲ್ಲಿ ತತ್ಕಾಲ್ ಪೋಡಿ ಮತ್ತು 11ಇ ಕೋರಿ ಸ್ವೀಕೃತವಾದ ಅರ್ಜಿಗಳ ಪ್ರಗತಿ ವಿವರ ಈ ಕೆಳಕಂಡಂತಿದೆ.
<table>
<tr><th>ತರಹೆ</th><th>ಪ್ರಾ.ಶಿಲ್ಕು</th><th>ಸ್ವೀಕೃತಿ</th><th>ಒಟ್ಟು</th><th>ವಿಲೇ</th><th>ಬಾಕಿ</th><th>ಕಂದಾಯ ಶಾಖೆಯಲ್ಲಿ ಬಾಕಿ</th><th>ಭೂಮಾಪನ ಶಾಖೆಯಲ್ಲಿ ಬಾಕಿ</th></tr>
<tr><td>ತತ್ಕಾಲ್ ಪೋಡಿ</td><td>83347</td><td>148172</td><td>231519</td><td>99979</td><td>131540</td><td>66210</td><td>65330</td></tr>
<tr><td>11ಇ</td><td>171178</td><td>549188</td><td>720366</td><td>405785</td><td>314581</td><td>107455</td><td>207126</td></tr>
</table>
</td></tr>
<tr><td>ಆ)</td><td>ಸದರಿ ಅರ್ಜಿಗಳನ್ನು ವಿತರಣೆ ಮಾಡುವಲ್ಲಿ ಆಗಿರುವ ವಿಳಂಬದಿಂದ ರೈತರಿಗೆ ತುಂಬಾ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td rowspan="2">
ತತ್ಕಾಲ್ ಪೋಡಿ, 11ಇ ಇತ್ಯಾದಿ ಅಳತೆ ಅರ್ಜಿಗಳ ತ್ವರಿತ ವಿಲೇವಾರಿಗೆ ಸರ್ಕಾರ ಕೈಗೊಂಡ ಕ್ರಮಗಳು
1) ಇಲಾಖೆಯಲ್ಲಿ ಅಳತೆ ಕೋರಿ ಸ್ವೀಕೃತವಾಗುವ ಎಲ್ಲಾ ಅರ್ಜಿಗಳನ್ನು ಮೋಜಿಣಿ ತಂತ್ರಾಂಶದ ಮುಖಾಂತರ ಆನ್‌ಲೈನ್‌ನಲ್ಲಿ ಸ್ವೀಕರಿಸಲಾಗುತ್ತಿದ್ದು, ತಂತ್ರಾಂಶದ ಪ್ರತಿ ಹಂತದಲ್ಲಿಯೂ FIFO(ಸರದಿ ಸಾಲಿನಂತೆ) ಅಳವಡಿಸಲಾಗಿದೆ. ಪ್ರಕರಣವು ಅಳತೆಗೆ ಯೋಗ್ಯವಾಗಿದ್ದಲ್ಲಿ FIFO(ಸರದಿ ಸಾಲಿನಂತೆ) ಅಳತೆಗಾಗಿ ಭೂಮಾಪಕರಿಗೆ ತಂತ್ರಾಂಶದ ಮೂಲಕ ಆನ್‌ಲೈನ್‌ನಲ್ಲಿ ವಿತರಿಸಲಾಗುತ್ತಿದೆ. ಅಳತೆ ನಂತರ ಆನ್‌ಲೈನ್‌ನಲ್ಲಿ ಕಡತಗಳನ್ನು ಅಪ್‌ಲೋಡ್ ಮಾಡಲು ಹಾಗೂ ಅಪ್‌ಲೋಡ್ ಮಾಡಿರುವ ಕಡತಗಳ ಪರಿಶೀಲನೆ ಮತ್ತು ಅನುಮೋದನೆಯನ್ನು ಸಹ ಆನ್‌ಲೈನ್ ನಲ್ಲೇ ನಿರ್ವಹಿಸಲಾಗುತ್ತಿದೆ. ತಂತ್ರಾಂಶದ ಮುಖಾಂತರ ಪ್ರಕರಣಗಳ ವಿಲೇವಾರಿ ಯಲ್ಲಿ ಯಾವುದೇ ವಿಳಂಬಕ್ಕೆ ಅವಕಾಶವಿಲ್ಲದಂತೆ ಕ್ರಮವಹಿಸಲಾಗುತ್ತಿದೆ.
2) ಕಂದಾಯ ಇಲಾಖೆಯಿಂದ ಪಹಣಿ ತಿದ್ದುಪಡಿ ಕುರಿತು ಕಂದಾಯ ಅದಾಲತ್ ಗಳನ್ನು ನಡೆಸಲಾಗುತ್ತಿದೆ
3) ವಿಡಿಯೋ ಸಂವಾದ ಮತ್ತು ವಿಭಾಗವಾರು ಅಧಿಕಾರಿಗಳ ಸಭೆ ನಡೆಸಿ ಪ್ರಗತಿ ಪರಿಶೀಲನೆ ಮಾಡಿ ಹೆಚ್ಚಿನ ಪ್ರಗತಿ ಸಾಧಿಸಲು ಸೂಕ್ತ ಮಾರ್ಗದರ್ಶನ ಮತ್ತು ಅಗತ್ಯ ಸೂಚನೆ ನೀಡಲಾಗುತ್ತಿದೆ.
4) ಹೆಚ್ಚಿನ ಪ್ರಕರಣಗಳು ಬಾಕಿ ಇರುವ ತಾಲ್ಲೂಕುಗಳಿಗೆ ಕಡಿಮೆ ಪ್ರಕರಣಗಳು ಬಾಕಿ ಇರುವ ತಾಲ್ಲೂಕಿನಿಂದ ಭೂಮಾಪಕ ರನ್ನು ನಿಯೋಜನೆ ಮಾಡಿ ಪ್ರಕರಣಗಳನ್ನು ವಿಲೇಗೊಳಿ ಸಲು ಕ್ರಮ ಕೈಗೊಳ್ಳಲಾಗುತ್ತಿದೆ.
5) 11ಇ, ತತ್ಕಾಲ್ ಪೋಡಿ ಇತ್ಯಾದಿ ಪ್ರಕರಣಗಳು ಹೆಚ್ಚಿನ ಸಂಖ್ಯೆಯಲ್ಲಿ ಬಾಕಿಯಿರುವುದನ್ನು ಗಮನಿಸಿ, 2072 ಪರವಾನಗಿ ಭೂಮಾಪಕರ ಆಯ್ಕೆ ಕುರಿತು ಅರ್ಜಿಗಳನ್ನು ಆಹ್ವಾನಿಸಿದ್ದು, ಪರೀಕ್ಷೆಯನ್ನು ನಡೆಸಿ, ಜಿಲ್ಲಾವಾರು ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ, ತರಬೇತಿ ನಂತರ ಉತ್ತೀರ್ಣವಾದ 820 ಜನ ಪರವಾನಗಿ ಭೂಮಾಪಕರನ್ನು ದಿನಾಂಕ 03-09-2021 ರಂದು Counselling ಮೂಲಕ ಸ್ಥಳ ನಿಯುಕ್ತಿಗೊಳಿಸಲಾಗಿದೆ. ಸಪ್ಟೆಂಬರ್-2021 ರ ಮಾಹೆಯ ಅಂತ್ಯಕ್ಕೆ
</td></tr>
<tr><td>ಇ)</td><td>ತುರ್ತು ವಿಲೇವಾರಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)</td></tr>
</table>

		ಎಲ್ಲಾ ಆಯ್ಕೆಗೊಂಡ ಪರವಾನಗಿ ಭೂಮಾಪಕರುಗಳು ರಾಜ್ಯದ ವಿವಿಧ ನಿಯೋಜಿತ ತಾಲ್ಲೂಕುಗಳಿಗೆ ಕಾರ್ಯ ನಿರ್ವಹಿಸಲಿದ್ದಾರೆ. ಇದರಿಂದ ಬಾಕಿ ಪ್ರಕರಣಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಲು ಸಾಧ್ಯವಾಗುತ್ತದೆ
ಈ)	ಜಿಯೋ ಸ್ಪೇಸ್ ತಂತ್ರಜ್ಞಾನವನ್ನು ಬಳಸಿಕೊಂಡು, ಪೋಡಿ / ಭೂಮಾಪನ ಮತ್ತು ನಕ್ಷೆಗಳನ್ನು ತಯಾರು ಮಾಡಲು ಸರ್ಕಾರ ಚಿಂತಿಸಿದೆಯೇ;	ರಾಜ್ಯದಲ್ಲಿ ಅತ್ಯಾಧುನಿಕ ತಂತ್ರಜ್ಞಾನವಾದ ಡ್ರೋಣ್ ಬಳಸಿ ಸರ್ವೆ ಆಫ್ ಇಂಡಿಯಾ ಸಂಸ್ಥೆಯ ಸಹಯೋಗದೊಂದಿಗೆ ರಾಜ್ಯದಲ್ಲಿ ಮರು ಭೂಮಾಪನ ಕೈಗೊಳ್ಳಲು ನಿರ್ಧರಿಸಿದ್ದು, ಮೊದಲನೇ ಹಂತದಲ್ಲಿ 5 ಜಿಲ್ಲೆಗಳಲ್ಲಿ ಮತ್ತು ಎರಡನೇ ಹಂತದಲ್ಲಿ 8 ಜಿಲ್ಲೆಗಳಲ್ಲಿ ಮರುಭೂಮಾಪನ ಕಾರ್ಯ ಕೈಗೊಳ್ಳಲಾಗುತ್ತಿದೆ. ಅದರಂತೆ ಪೂರ್ವಸಿದ್ಧತೆ ಕಾರ್ಯ ಪ್ರಾರಂಭಿಸಲಾಗಿದ್ದು, ಪ್ರಾಯೋಗಿಕವಾಗಿ ರಾಮನಗರ ಮತ್ತು ತುಮಕೂರು ಜಿಲ್ಲೆಗಳಲ್ಲಿ ಡ್ರೋನ್ ಸರ್ವೆ ಕಾರ್ಯವನ್ನು ಪ್ರಾರಂಭಿಸಿ, ಗ್ರೌಂಡ್ ಕಂಟ್ರೋಲ್ ಪಾಯಿಂಟ್‌ಗಳನ್ನು ಸ್ಥಾಪಿಸಿದ್ದು, ಡ್ರೋನ್ Flying ಕಾರ್ಯವನ್ನು ಪ್ರಾರಂಭಿಸಲಾಗಿರುತ್ತದೆ. ಅದೇ ರೀತಿಯಾಗಿ ಹಂತ ಹಂತವಾಗಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿಯೂ ಸಹಾ ಮರುಭೂಮಾಪನ ಕಾರ್ಯ ಕೈಗೊಳ್ಳಲು ಉದ್ದೇಶಿಸಲಾಗಿದೆ. ಈ ರೀತಿಯಾಗಿ ರಾಜ್ಯದಲ್ಲಿ ಅತ್ಯಾಧುನಿಕ ತಂತ್ರಜ್ಞಾನ ಬಳಸಿ ಮರುಭೂಮಾಪನ ಕಾರ್ಯ ಕೈಗೊಂಡು ನಂತರದಲ್ಲಿ ಸದರಿ ದಾಖಲೆಗಳನ್ನು ಬಳಸಿ ಪೋಡಿ ಮತ್ತು ನಕ್ಷೆಗಳನ್ನು ತಯಾರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.
ಉ)	ಹಾಗಾದಲ್ಲಿ ಯಾವ ಕಾಲಮಿತಿಯಲ್ಲಿ ಸದರಿ ತಂತ್ರಜ್ಞಾನವನ್ನು ಬಳಸಿಕೊಳ್ಳಲಾಗುವುದು?	

<u>**ಸಂಖ್ಯೆ: ಕಂಇ 157 ಎಸ್‌ಎಸ್‌ಸಿ 2021**</u>

(ಆರ್.ಅಶೋಕ)

ಕಂದಾಯ ಸಚಿವರು